# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಮಕೂರು ಶಾಖಾ ನಾಲೆಯ ಸರಪಳಿ 48.250 ಕಿ.ಮೀ ನಿಂದ ನೀರೆತ್ತಿ ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಜಯಚಾಮರಾಜಪುರ ಕೆರೆಗೆ ಕುಡಿಯುವ ನೀರಿಗಾಗಿ ಕೆರೆ ತುಂಬಿಸುವ ಕಾಮಗಾರಿಯ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

***ಓದಲಾಗಿದೆ :-***

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ:ಕಾನೀನಿ/ತಾಂತ್ರಿಕ-2/2019-20/2633, ದಿನಾಂಕ:14-10-2019.

***ಪ್ರಸ್ತಾವನೆ :-***

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ಹೇಮಾವತಿ ಶಾಖಾ ನಾಲೆಯಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಆಯ್ದ ಕೆರೆಗಳಿಗೆ ಕುಡಿಯುವ ನೀರು ಹರಿಸುವ ಯೋಜನೆಯಲ್ಲಿ 2 ಭಾಗಗಳಿದ್ದು, ಒಂದು ಭಾಗವು ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯ 45.150 ಕಿ.ಮೀ. ನಿಂದ ಗುರುತ್ವಾಕರ್ಷಣೆ ಮುಖಾಂತರ 21 ಕೆರೆಗಳಿಗೆ ನೀರನ್ನು ಒದಗಿಸುವ ಕಾಮಗಾರಿ, ಮತ್ತೊಂದು ಭಾಗವು ತುಮಕೂರು ಶಾಖಾ ನಾಲೆಯ 48.250 ಕಿ.ಮೀ. ನಿಂದ ನೀರನ್ನು ಲಿಫ್ಟ್ ಮೂಲಕ 4 ಕೆರೆಗಳಿಗೆ ನೀರನ್ನು ಒದಗಿಸುವ ಕಾಮಗಾರಿ ಆಗಿರುವುದಾಗಿ ತಿಳಿಸಿರುತ್ತಾರೆ.

2. ಯೋಜನೆಯ ಕಾಮಗಾರಿಯನ್ನು ದಿನಾಂಕ:27-02-2013 ರಂದು ಟೆಂಡರ್ ಆಧಾರದ ಮೇಲೆ ನೀಡಲಾಗಿದ್ದು, ಗುತ್ತಿಗೆದಾರರು 2014 ರ ಅಂತ್ಯಕ್ಕೆ ಲಿಫ್ಟ್ ಭಾಗದ ಕಾಮಗಾರಿಯನ್ನು ಪೂರ್ಣಗೊಳಿಸಿ ಪ್ರಾಯೋಗಿಕವಾಗಿ 2014-15ನೇ ಸಾಲಿನಿಂದ ಯೋಜಿತ ಕೆರೆಗಳಾದ ನಡುವನಹಳ್ಳಿ, ಜೆ.ಸಿ.ಪುರ, ಮಲಗೊಂಡನಹಳ್ಳಿ ಮತ್ತು ಬ್ಯಾಡರಹಳ್ಳಿ ಕೆರೆಗಳಿಗೆ ನೀರನ್ನು ಹರಿಸಲಾಗಿರುತ್ತದೆ ಎಂದು ವರದಿ ಮಾಡಿರುತ್ತಾರೆ.

3. ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರು ಜೆ.ಸಿ.ಪುರ ಕೆರೆಗೆ ಪ್ರತ್ಯೇಕ ಪೈಪ್ ಲೈನ್ ನಿರ್ಮಿಸಿ ಕೆರೆಗೆ ನೀರನ್ನು ಒದಗಿಸುವಂತೆ ಕೋರಿರುತ್ತಾರೆ. ಸದರಿ ಕೆರೆಗೆ ಜನಗಣತಿ ಆಧಾರದ ಮೇಲೆ ಕುಡಿಯುವ ನೀರಿಗಾಗಿ 24.49 ಎಂ.ಸಿ.ಎಫ್.ಟಿ. (85 ಎಲ್.ಪಿ.ಸಿ.ಡಿ) ನೀರಿನ ಅವಶ್ಯಕತೆ ಇರುತ್ತದೆ. ಈ ನೀರಿನ ಪ್ರಮಾಣವನ್ನು ಈಗಾಗಲೇ ಹಂಚಿಕೆಯಾಗಿರುವ ಚಿಕ್ಕನಾಯಕನಹಳ್ಳಿ ಕುಡಿಯುವ ನೀರಿನ ಯೋಜನೆಯಿಂದ ಕಡಿತಗೊಳಿಸಿ ಸದರಿ ಕೆರೆಗೆ ಉಪಯೋಗಿಸಿಕೊಳ್ಳಲಾಗುವುದು ಎಂದು ವರದಿ ಮಾಡಿರುತ್ತಾರೆ.

4. ಈ ಹಿನ್ನೆಲೆಯಲ್ಲಿ, ತುಮಕೂರು ಶಾಖಾ ನಾಲೆಯ ಸರಪಳಿ 48.250 ಕಿ.ಮೀ ನಿಂದ ನೀರೆತ್ತಿ ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಜಯಚಾಮರಾಜಪುರ ಕೆರೆಗೆ ಕುಡಿಯುವ ನೀರಿಗಾಗಿ ಕೆರೆ ತುಂಬಿಸುವ ಕಾಮಗಾರಿಯ ರೂ.9.90 ಕೋಟಿಗಳ ಮೊತ್ತದ ಅಂದಾಜನ್ನು ತಯಾರಿಸಿ ದಿನಾಂಕ:20-09-2019 ರಂದು ನಡೆದ ಕಾವೇರಿ ನೀರಾವರಿ ನಿಗಮದ 70ನೇ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು, ಸದರಿ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ಕೋರಿರುತ್ತಾರೆ.

5. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಜಸಂಇ 41 ಎನ್ ಹೆಚ್ ಪಿ 2019,**

**ಬೆಂಗಳೂರು, ದಿನಾಂಕ: 08-11-2019**

ತುಮಕೂರು ಶಾಖಾ ನಾಲೆಯ ಸರಪಳಿ 48.250 ಕಿ.ಮೀ ನಿಂದ ನೀರೆತ್ತಿ ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಜಯಚಾಮರಾಜಪುರ ಕೆರೆಗೆ ಕುಡಿಯುವ ನೀರಿಗಾಗಿ ಕೆರೆ ತುಂಬಿಸುವ ಕಾಮಗಾರಿಯ ರೂ.9.90 ಕೋಟಿ (ರೂಪಾಯಿ ಒಂಬತ್ತು ಕೋಟಿ ತೊಂಬತ್ತು ಲಕ್ಷಗಳು ಮಾತ್ರ) ಮೊತ್ತದ ಅಂದಾಜಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:FD 01 TFP 2019, ದಿನಾಂಕ:04-07-2019ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

08/11/19

**(ಬಿ.ಹರಿನಾರಾಯಣ)**
**ಸರ್ಕಾರದ ಅಧೀನ ಕಾರ್ಯದರ್ಶಿ (ತಾಂ-2),**
**ಜಲ ಸಂಪನ್ಮೂಲ ಇಲಾಖೆ.**

**ಇವರಿಗೆ :-**

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕ ಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಹೇಮಾವತಿ ನಾಲಾ ವಲಯ, ತುಮಕೂರು.
4. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.